ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, ಮಲ್ಲೇಶ್ವರಂ, ಬೆಂಗಳೂರು-560 003.

ಸಂಖ್ಯೆ: ಪಿಯು.ಮೌಮಾವಿ1/ಪ-2/ಶುಲ್ಕ/04/2024-25 ದಿನಾಂಕ: 09.04.2026

## ಸುತ್ತೋಲೆ

ವಿಷಯ: 2026 ರ ದ್ವಿತೀಯ ಪಿಯುಸಿ ಪರೀಕ್ಷೆ-2 ಕ್ಕೆ ಪುನಾವರ್ತಿತ ವಿದ್ಯಾರ್ಥಿಗಳು ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಪಿ 282 ಎಸ್ ಹೆಚ್ ಹೆಚ್ 2025 ದಿನಾಂಕ: 12.02.2026

*****

2026ನೇ ಸಾಲಿನಲ್ಲಿ ನಡೆಯಲಿರುವ ದ್ವಿತೀಯ ಪಿಯುಸಿ ಪರೀಕ್ಷೆ-2 ಕ್ಕೆ ಪುನಾವರ್ತಿತ ಹಾಗೂ ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಉಲ್ಲೇಖಿತ ಸರ್ಕಾರದ ಆದೇಶದಂತೆ ಅವಕಾಶ ಕಲ್ಪಿಸಲಾಗಿದೆ.

1. 2025 ಮತ್ತು 2026 ರ ದ್ವಿತೀಯ ಪಿಯುಸಿ ಪರೀಕ್ಷೆ-1ಕ್ಕೆ ಹೊಸ ಮತ್ತು ಖಾಸಗಿ ಅಭ್ಯರ್ಥಿಯಾಗಿ ನೋಂದಣಿಯಾಗಿ ಉತ್ತೀರ್ಣ/ಅನುತ್ತೀರ್ಣರಾದ ಅಭ್ಯರ್ಥಿಗಳು ಫಲಿತಾಂಶ ಉತ್ತಮಪಡಿಸಿಕೊಳ್ಳಲು 2026 ರ ಪರೀಕ್ಷೆ-2 ಕ್ಕೆ ನೋಂದಾಯಿಸಿಕೊಳ್ಳಲು ಇಚ್ಛಿಸಿದಲ್ಲಿ, ಅಂತಹ ಅಭ್ಯರ್ಥಿಗಳು ಆನ್‌ಲೈನ್ ಮುಖಾಂತರ ಅಂತರ್ಜಾಲದ ಲಿಂಕ್: http://tinyurl.com/mvp9k6es ಅನ್ನು ಬಳಸಿ ಫಲಿತಾಂಶ ಉತ್ತಮಪಡಿಸಿಕೊಳ್ಳಲು ನಿಗದಿತ ಶುಲ್ಕ ಪಾವತಿಸಿ ನೋಮದಾಯಿಸಿಕೊಳ್ಳುವುದು. ಸದರಿ ಪ್ರಕ್ರಿಯೆಗೆ ಮಂಡಲಿಯ ಅನುಮತಿ ಪಡೆಯುವ ಅವಶ್ಯಕತೆ ಇರುವುದಿಲ್ಲ.
2. ಮಾರ್ಚ್-2026 ರ ದ್ವಿತೀಯ ಪಿಯುಸಿ ಪರೀಕ್ಷೆ-1 ಮತ್ತು ಹಿಂದಿನ ಪರೀಕ್ಷೆಗಳಲ್ಲಿ ಅನುತ್ತೀರ್ಣರಾದ ಮತ್ತು ಗೈರುಹಾಜರಾದ ಅಭ್ಯರ್ಥಿಗಳು ಪರೀಕ್ಷೆ-2 ಕ್ಕೆ ಆನ್‌ಲೈನ್ ಮುಖಾಂತರ ಅಂತರ್ಜಾಲದ ಲಿಂಕ್: http://tinyurl.com/mvp9k6es ಅನ್ನು ಬಳಸಿ ನೋಂದಾಯಿಸಿಕೊಳ್ಳುವುದು.
3. **ಮರುಮೌಲ್ಯಮಾಪನ ಮತ್ತು ಮರುಎಣಿಕೆಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳು ಮರುಮೌಲ್ಯಮಾಪನ/ಮರುಎಣಿಕೆಯ ಫಲಿತಾಂಶಕ್ಕೆ ಕಾಯದೆ ಅವಶ್ಯಕತೆಯಿದ್ದಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ-2ಕ್ಕೆ ನಿಗದಿತ ದಿನಾಂಕದೊಳಗಾಗಿ ಆನ್‌ಲೈನ್‌ನಲ್ಲಿ ನೋಂದಾಯಿಸಿಕೊಳ್ಳುವುದು.**

**2026 ರ ದ್ವಿತೀಯ ಪಿಯುಸಿ ಪರೀಕ್ಷೆ-2ಕ್ಕೆ ನೋಂದಾಯಿಸಿಕೊಳ್ಳುವ ಪುನರಾವರ್ತಿತ ವಿದ್ಯಾರ್ಥಿಗಳಿಗೆ (Not Completed) ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ.**

ಪುನರಾವರ್ತಿತ /ಫಲಿತಾಂಶ ಉತ್ತಮಪಡಿಸಿಕೊಳ್ಳುವ ಅಭ್ಯರ್ಥಿಗಳು ದಿನಾಂಕ: **09.04.2026** ರಿಂದ **17.04.2026** ರವರೆಗೆ ಪರೀಕ್ಷೆ-2 ಕ್ಕೆ ನೋಂದಾಯಿಸಿಕೊಳ್ಳಬಹುದು.

**ಪರೀಕ್ಷೆ-2 ಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ವಿಧಾನದ ಕುರಿತಂತೆ ಅಂತರ್ಜಾಲದ ಲಿಂಕ್ https://tinyurl.com/yzzps6se ಅನ್ನು ಸಂಪರ್ಕಿಸುವುದು**.

ಫಲಿತಾಂಶ ಉತ್ತಮಪಡಿಸಿಕೊಳ್ಳುವ ವಿದ್ಯಾರ್ಥಿಗಳು ಕೆಳಗಿನಂತೆ ಶುಲ್ಕವನ್ನು ಪಾವತಿಸಿ ನಿಗದಿತ ದಿನಾಂಕದೊಳಗೆ ದ್ವಿತೀಯ ಪಿಯುಸಿ ಪರೀಕ್ಷೆ-2ಕ್ಕೆ ಆನ್‌ಲೈನ್‌ನಲ್ಲಿ ಮಾತ್ರ ನೋಂದಾಯಿಸಿಕೊಳ್ಳಬಹುದು.

| ಫಲಿತಾಂಶ ಉತ್ತಮಪಡಿಸಿಕೊಳ್ಳಲು (IMPROVEMENT) ಶುಲ್ಕ | |
|---|---|
| ಪ್ರಥಮ ಬಾರಿಗೆ ಒಂದು ವಿಷಯಕ್ಕೆ | ರೂ. 175/- |
| ಎರಡನೇ ಬಾರಿಗೆ ಒಂದು ವಿಷಯಕ್ಕೆ | ರೂ. 350/- |

ಪ್ರಾಂಶುಪಾಲರು PU EXAM-2 ಲಾಗಿನ್‌ನಿಂದ ತಮ್ಮ ಕಾಲೇಜಿನಲ್ಲಿ ನೋಂದಣಿಯಾದ ವಿದ್ಯಾರ್ಥಿಗಳ ವಿವರಗಳುಳ್ಳ ಚೆಕ್‌ಲಿಸ್ಟ್ ಅನ್ನು ಮುದ್ರಿಸಿ, ದೃಢೀಕರಿಸಿ ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರಿಗೆ ದಿನಾಂಕ: 27.04.2026ರೊಳಗೆ ಸಲ್ಲಿಸುವುದು. ಸದರಿ ಮಾಹಿತಿಗಳನ್ನು ಜಿಲ್ಲಾ ಉಪನಿರ್ದೇಶಕರು, (ಪಿಯು) ರವರ ಕಛೇರಿಯಲ್ಲಿಯೇ ಕಾಯ್ದಿರಿಸಿಟ್ಟುಕೊಳ್ಳುವುದು.

ಪರೀಕ್ಷೆ-2 ಕ್ಕೆ ನೋಂದಾಯಿಸಿಕೊಂಡ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಪ್ರಾಂಶುಪಾಲರ **PU EXAM PORTAL** ನ ಲಾಗಿನ್‌ನಲ್ಲಿ **ದಿನಾಂಕ: 27.04.2026 ರಂದು** ಲಭ್ಯಗೊಳಿಸಲಾಗುವುದು. ಪ್ರಾಂಶುಪಾಲರು, ಎಲ್ಲಾ ಅಭ್ಯರ್ಥಿಗಳಿಗೆ ಕಡ್ಡಾಯವಾಗಿ **ಪ್ರವೇಶ ಪತ್ರಗಳನ್ನು** ಮುದ್ರಿಸಿ ಸಕಾಲದಲ್ಲಿ ವಿತರಿಸುವುದು.

ಅಧ್ಯಕ್ಷರು
ಕ.ಶಾ.ಪ ಮತ್ತು ಮೌ.ನಿ. ಮಂಡಲಿ,
ಮಲ್ಲೇಶ್ವರಂ, ಬೆಂಗಳೂರು

**ಇವರಿಗೆ**:-

1) ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು , ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) ಇವರಿಗೆ ಅಗತ್ಯ ಕ್ರಮಕ್ಕಾಗಿ ಹಾಗೂ ಒಂದು ಪ್ರತಿಯನ್ನು ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
2) ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ ಅಗತ್ಯ ಕ್ರಮಕ್ಕಾಗಿ.(ಜಿಲ್ಲಾ ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ, ಇವರ ಮೂಲಕ)

**ಪ್ರತಿಯನ್ನು:**

1) ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ, (ಪದವಿ ಪೂರ್ವ) 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12 ರವರಿಗೆ ಮಾಹಿತಿಗಾಗಿ.
2) ನಿರ್ದೇಶಕರು, (ಪರೀಕ್ಷೆಗಳು) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ.
3) ಜಂಟಿ ನಿರ್ದೇಶಕರು (ಪಿಯು ಪರೀಕ್ಷೆ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ರವರಿಗೆ.
4) ಉಪನಿರ್ದೇಶಕರು (ಪಿಯು ಪರೀಕ್ಷೆ) ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಲಿ, 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು ರವರಿಗೆ.
5) ಕಛೇರಿ ಪ್ರತಿ.